**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.130/2012**

**ಸಿ.ಡಬ್ಲ್ಯೂ-09**

**ಪಿ.ಡಬ್ಲ್ಯೂ-05**

ಸಾಕ್ಷಿಯ ಹೆಸರು : ಮಹಾದೇವ ಯಲೀಗಾರ

ತಂದೆ/ಗಂಡನ ಹೆಸರು : ಲಕ್ಷ್ಮಣ

ವಯಸ್ಸು : 52 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಧಾರವಾಡ

**ದಿನಾಂಕ:08-05-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ನಾನು 2010 ರಿಂದ 2011 ರವರೆಗೆ ಪಿ.ಎಸ್.ಐ ಅಂತಾ ಚಡಚಣ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ19.10.2011 ರಂದು ಚಾಸಾ 8 ರವರಿಂದ ಪ್ರಕರಣದ ಕಡತವನ್ನು ಪಡೆದುಕೊಂಡು ಪರಿಶೀಲನೆ ಮಾಡಿರುತ್ತೇನೆ. 2 ನೇ ಆರೋಪಿಯು ನ್ಯಾಯಾಲಯದಿಂದ ಜಾಮೀನನ್ನು ಪಡೆದುಕೊಂಡು ಬಂದು ನನ್ನ ಮುಂದೆ ಹಾಜರುಪಡಿಸಿದ್ದು ಆತನನ್ನು ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ನಂತರ ರಾ.ಪ. ವರದಿಯನ್ನು ಸ್ವೀಕರಿಸಿರುತ್ತೇನೆ. ನಂತರ ಆರೋಪಿಯ ಮೇಲೆ ಸಾಕಷ್ಟು ಸಾಕ್ಷ್ಯಾಧಾರಗಳು ಕಂಡುಬಂದ ಕಾರಣ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ರಾ.ಪ. ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.4(ಎ) ಎಂದು ಗುರುತಿಸಲಾಯಿತು. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲು: 2 ನೇ ಆರೋಪಿ ಪರ ಶ್ರೀ.ಎಸ್.ಆರ್.ಬಿ. ವಕೀಲರಿಂದಃ**

ಯಾವ ಬ್ಯಾಚ್ ನಂಬರ್ ಮುದ್ದೆಮಾಲನ್ನು ರಾ.ಪ. ಗೆ ಕಳುಹಿಸಿರುತ್ತಾರೆ ಮತ್ತು ಅದನ್ನು ಸ್ವೀಕರಿಸಿರುತ್ತೇನೆ ಎಂದು ಗೊತ್ತಿರುತ್ತದೆ. ಆರೋಪಿಗೂ ಮತ್ತು ಈ ಮುದ್ದೆಮಾಲಿಗೂ ಯಾವುದೇ ಸಂಬಂಧವಿಲ್ಲದೇ ಇದ್ದರು ಸಹ ಚಾಸಾ 1 ರವರು

-2-

ಮಾಡಿರುವ ಸುಳ್ಳು ದೂರಿಗೆ ಅನುಕೂಲವಾಗುವಂತೆ ನಾನು ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**